ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮಂಡ್ಯ ಜಿಲ್ಲೆ, ಮಂಡ್ಯ

ಸಂ. ಎಲ್.ಎ.ಕ್ಯೂ(2):ಸಿಆರ್:64/11-12

ದಿನಾಂಕ: 14/08/2019

ಪತ್ರಿಕಾ ಪ್ರಕಟಣೆ

ವಿಷಯ: ಕಂದಾಯ ಇಲಾಖೆಯಲ್ಲಿ ಭೂಸ್ವಾಧೀನ ಹಾಗೂ ಇತರೆ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಕಾನೂನಿನ ಸಲಹೆ ನೀಡಲು ಕಾನೂನು ಸಲಹೆಗಾರರನ್ನು ನೇಮಕ ಮಾಡುವ ಬಗ್ಗೆ.

ಉಲ್ಲೇಖ: 1)ಸರ್ಕಾರದ ಆದೇಶ ಸಂಖ್ಯೆ:ಕಂಇ 34 ಭೂಸ್ವಾಬೆ 2010, ದಿನಾಂಕ:27/09/2010.
2)ಸರ್ಕಾರದ ತಿದ್ದುಪಡಿ ಆದೇಶ ಸಂ:ಕಂಇ 34 ಭೂಸ್ವಾಬೆ 2010 ದಿನಾಂಕ:11/10/2012.

*****

ಕಂದಾಯ ಇಲಾಖೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಭೂಸ್ವಾಧೀನ ಹಾಗೂ ಇತರೆ ಪ್ರಕರಣಗಳಲ್ಲಿ ಕಾನೂನಿನ ಸಲಹೆ ನೀಡಲು ಕಾನೂನು ಸಲಹೆಗಾರರ ಹುದ್ದೆಗಳನ್ನು ಸೃಜಿಸಲಾಗಿದೆ. ಈ ಹುದ್ದೆಗೆ ಕಾನೂನು ಪದವೀಧರರಾಗಿರುವ(ಎಲ್.ಎಲ್.ಬಿ) ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಬಗ್ಗೆ ಹಾಗೂ ಕಾನೂನು ಸಲಹೆಗಾರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 313(ಬಿ) ಪ್ರಕಾರ ಮಾಸಿಕ ಸಂಚಿತ ವೇತನವನ್ನು ನಿಗಧಿಗೊಳಿಸುವುದು ಎಂದು ಉಲ್ಲೇಖದ ಸರ್ಕಾರದ ನಡವಳಿಗಳಲ್ಲಿ ನಿರ್ದೇಶನ ನೀಡಿರುತ್ತಾರೆ.

ಸರ್ಕಾರದ ಉಲ್ಲೇಖದ ಆದೇಶದನ್ವಯ, ಜಿಲ್ಲಾಧಿಕಾರಿಗಳ ಕಛೇರಿ, ಮಂಡ್ಯ ಜಿಲ್ಲೆ, ಮಂಡ್ಯ ಇಲ್ಲಿ ಕಾರ್ಯನಿರ್ವಹಿಸಲು ಆಸಕ್ತ ನಿವೃತ್ತ ಸಿವಿಲ್ ನ್ಯಾಯಾಧೀಶರು (ಕಾನೂನು ಸಲಹೆಗಾರರು) ದಿನಾಂಕ:03-09-2019 ರೊಳಗಾಗಿ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ರವರನ್ನು ಸಂಪರ್ಕಿಸಬಹುದಾಗಿದೆ.

ಜಿಲ್ಲಾಧಿಕಾರಿ
ಮಂಡ್ಯ ಜಿಲ್ಲೆ, ಮಂಡ್ಯ

ಪ್ರತಿಯನ್ನು:-

1 ಜಿಲ್ಲಾ ವಿಜ್ಞಾನ ಸೂಚನಾಧಿಕಾರಿ, ಎನ್.ಐ.ಸಿ., ಜಿಲ್ಲಾ ಪಂಚಾಯತ್, ಮಂಡ್ಯ ರವರಿಗೆ ಕಳುಹಿಸುತ್ತಾ, ಸದರಿ ಪ್ರಕಟಣೆಯನ್ನು ಮಂಡ್ಯ ಜಿಲ್ಲಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮವಹಿಸಲು ಕೋರಿದೆ.
2 ಉಪವಿಭಾಗಾಧಿಕಾರಿ, ಮಂಡ್ಯ/ಪಾಂಡವಪುರ ರವರಿಗೆ ಕಳುಹಿಸುತ್ತಾ, ಕಛೇರಿ ನಾಮಫಲಕದಲ್ಲಿ ಪ್ರಕಟಿಸಲು ಕೋರಿದೆ.
3 ತಹಶೀಲ್ದಾರ್, ಮಂಡ್ಯ/ಮದ್ದೂರು/ಮಳವಳ್ಳಿ/ಪಾಂಡವಪುರ/ಶ್ರೀರಂಗಪಟ್ಟಣ/ಕೆ.ಆರ್.ಪೇಟೆ/ನಾಗಮಂಗಲ ರವರಿಗೆ ಕಳುಹಿಸುತ್ತಾ, ಕಛೇರಿ ನಾಮಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
4 ಈ ಕಛೇರಿಯ ನಾಮಫಲಕದಲ್ಲಿ ಪ್ರಕಟಿಸಲು
5 ಜಿಲ್ಲಾ ವಾರ್ತಾ ಅಧಿಕಾರಿ, ವಾರ್ತಾ ಇಲಾಖೆ, ಮಂಡ್ಯ ಜಿಲ್ಲೆ, ಮಂಡ್ಯರವರಿಗೆ ಕಳುಹಿಸುತ್ತಾ, ಸದರಿ ಪ್ರಕಟಣೆಯನ್ನು ಮಂಡ್ಯ ಜಿಲ್ಲಾ ವಾರ್ತಾಇಲಾಖೆಯಲ್ಲಿ ಉಚಿತವಾಗಿ ಪ್ರಕಟಿಸಿ ಅಗತ್ಯ ಕ್ರಮವಹಿಸಲು ಕೋರಿದೆ.
6 ಕಛೇರಿ ಪ್ರತಿ